ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

# ಹತ್ತಾರು ಸವಾಲುಗಳ ಮೀರಿ ಘನತ್ಯಾಜ್ಯ ನಿರ್ವಹಣಾ ಘಟಕ ನಿರ್ಮಿಸಿದ ಹಣಬರಟ್ಟಿ ಗ್ರಾಮ

ಆರೋಗ್ಯ ಮತ್ತು ನೈರ್ಮಲ್ಯ ಒಂದೇ ನಾಣ್ಯದ ಎರಡು ಮುಖಗಳು. ನೈರ್ಮಲ್ಯ ಇರುವಲ್ಲಿ ಆರೋಗ್ಯ. ಅನೈರ್ಮಲ್ಯತೆ ಇದ್ದಲ್ಲಿ ಅನಾರೋಗ್ಯ. ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ ಘನತ್ಯಾಜ್ಯ ನಿರ್ವಹಣಾ ಘಟಕಗಳು ತ್ಯಾಜ್ಯ ನಿರ್ವಹಣೆ ಮಾಡುವ ಮೂಲಕ ಸ್ವಚ್ಛ ಪರಿಸರ ನಿರ್ಮಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ.

ಈ ರೀತಿ ತ್ಯಾಜ್ಯ ನಿರ್ವಹಣೆಗಾಗಿ ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಹಣಬರಟ್ಟಿ ಗ್ರಾಮ ಪಂಚಾಯಿತಿ ಯಲ್ಲಿ ನಿರ್ಮಿಸಲಾದ ಘನತ್ಯಾಜ್ಯ ನಿರ್ವಹಣಾ ಘಟಕ ಪ್ರಮುಖವಾದುದ್ದಾಗಿದೆ. ಹಣಬರಟ್ಟಿ ಗ್ರಾಮ ಪಂಚಾಯಿತಿಯು ಜಿಲ್ಲಾ ಕೇಂದ್ರದಿಂದ 34 ಕಿಮೀ ದೂರದಲ್ಲಿವೆ. ಈ ಗ್ರಾಮದಲ್ಲಿ 980 ಕುಟುಂಬಗಳಿದ್ದು, 4,166 ಜನರು ವಾಸಿಸುತ್ತಿದ್ದಾರೆ.

ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ಹಣಬರಹಟ್ಟಿ ಮುಂದುವರೆದ ಗ್ರಾಮವಾಗಿದ್ದರೂ ಗ್ರಾಮದಲ್ಲಿ ಎಲ್ಲೆಂದರಲ್ಲಿ ಜನರು ಒಣಕಸ ಎಸೆಯುತ್ತಿದ್ದರಿಂದ ಗ್ರಾಮದಲ್ಲಿ ಸ್ವಚ್ಛತೆ ಮಾಯವಾಗಿತ್ತು. ಬಳಿಕ ಗ್ರಾಮೀಣ ಪ್ರದೇಶದ ಸ್ವಚ್ಛತೆಗಾಗಿ ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ಘನ ತ್ಯಾಜ್ಯ ನಿರ್ವಹಣಾ ಘಟಕ ನಿರ್ಮಿಸಲು ಗ್ರಾಮ ಪಂಚಾಯಿತಿಯವರು ಮುಂದಾದರು.

ಘನತ್ಯಾಜ್ಯ ನಿರ್ವಹಣಾ ಘಟಕ ನಿರ್ಮಿಸುವ ಪೂರ್ವದಲ್ಲಿ ತಾತ್ಕಾಲಿಕವಾಗಿ ಕಟ್ಟಡವನ್ನು ಬಾಡಿಗೆ ಪಡೆದು ತ್ಯಾಜ್ಯ ನಿರ್ವಹಣೆ ಮಾಡುತ್ತಿದ್ದರು. ಬಳಿಕ ಸದರಿ **ಘನತ್ಯಾಜ್ಯ ನಿರ್ವಹಣಾ ಘಟಕವನ್ನು ರೂ 19,30,618.00 ವೆಚ್ಚದಲ್ಲಿ ನಿರ್ಮಿಸಲಾಯಿತು.** ಜನರು ಎಲ್ಲೆಂದರಲ್ಲಿ ಕಸ ಬಿಸಾಡದೆ ಸ್ವಚ್ಛವಾಹಿನಿಗೆ ಕಸ ನೀಡುವಂತೆ ಮಾಡಲು ಸಾರ್ವಜನಿಕರ ಮನವೊಲಿಕೆಗಾಗಿ ಸಾಕಷ್ಟು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಏರ್ಪಡಿಸಲಾಯಿತು. ಬಳಿಕ ಸಮುದಾಯಗಳಿಂದ ನಿಧಾನ ಗತಿಯಲ್ಲಿ ಉತ್ತಮ ಪ್ರತಿಕ್ರಿಯೆಗಳು ಬರುತ್ತಿದ್ದಂತೆ ಘನತ್ಯಾಜ್ಯವನ್ನು ಮನೆ ಮನೆಗಳಿಂದ ಸಂಗ್ರಹಿಸಲು ಸ್ವಚ್ಛ ವಾಹಿನಿ ವ್ಯವಸ್ಥೆ ಕಲ್ಪಿಸಲಾಯಿತು. ಅಲ್ಲದೇ ಆತ್ಮವಿಶ್ವಾಸದಿಂದ ಸ್ವಚ್ಛ ವಾಹಿನಿ ಚಲಾಯಿಸಲು ಸ್ವ-ಸಹಾಯ ಸಂಘದ ಮಹಿಳೆಯರೂ ಮುಂದೆ ಬಂದರು. ಬಳಿಕ ಸಮರ್ಪಕವಾಗಿ ತ್ಯಾಜ್ಯ ನಿರ್ವಹಣೆಯಲ್ಲಿ ಹಣಬರಟ್ಟಿ ಸ್ವಸಹಾಯ ಸಂಘದ ಮಹಿಳೆಯರು ತೊಡಗಿಕೊಳ್ಳುವ ಮೂಲಕ ಗ್ರಾಮದ ಸ್ವಚ್ಛತೆ ಕಾಪಾಡಲು ಪಣತೊಟ್ಟರು.

### ತ್ಯಾಜ್ಯವನ್ನು ಸಂಪನ್ಮೂಲವಾಗಿಸಿದ ಹಾದಿ

ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕಿನ ಹಣಬರಟ್ಟಿ ಗ್ರಾಮದಲ್ಲಿ ದಿನನಿತ್ಯ ಸಂಗ್ರಹಗೊಳ್ಳುತ್ತಿರುವ ಘನತ್ಯಾಜ್ಯವನ್ನು ಮನೆ ಮನೆಗಳಿಂದ ಸ್ವಚ್ಛ ವಾಹಿನಿಯ ಮೂಲಕ ಸಂಗ್ರಹ ಮಾಡಿ ಘನತ್ಯಾಜ್ಯ ನಿರ್ವಹಣಾ ಘಟಕಕ್ಕೆ ತರಲಾಗುತ್ತಿದೆ. ಬಳಿಕ ಸ್ವ-ಸಹಾಯ ಸಂಘದ ಮಹಿಳೆಯರು ಒಟ್ಟಾಗಿ ಸೇರಿ ಪೇಪರ್, ರಟ್ಟುಗಳು, ಕಬ್ಬಿಣ ಇನ್ನಿತರ ಘನತ್ಯಾಜ್ಯವನ್ನು ವಿಂಗಡಿಸುವ ಮೂಲಕ ಸಂಪತ್ತಿನ ಮೂಲವನ್ನಾಗಿಸುತ್ತಿದ್ದಾರೆ.

### ಘನತ್ಯಾಜ್ಯ ನಿರ್ವಹಣಾ ಘಟಕ ನಿರ್ಮಾಣಕ್ಕೆ ಶ್ಲಾಘನೆ

ಘನತ್ಯಾಜ್ಯ ನಿರ್ವಹಣಾ ಘಟಕದ ಪರಿಶೀಲನೆಗಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಭೇಟಿ ನೀಡಿ ವಿಲೇವಾರಿ ಘಟಕದ ಕಾರ್ಯ ನಿರ್ವಹಣೆಯ ಕುರಿತು ಹರ್ಷ ವ್ಯಕ್ತಪಡಿಸಿದರು ಹಾಗೂ ಹಸಿ ತ್ಯಾಜ್ಯವನ್ನು ವಿಲೇವಾರಿ ಮಾಡಲು ಕಾಂಪೋಸ್ಟ್ ಪಿಟ್ ಅಳವಡಿಸಿಕೊಳ್ಳಲು ಸಲಹೆ ನೀಡಿದರು. ಇದೀಗ ಹಸಿ ತ್ಯಾಜ್ಯ ನಿರ್ವಹಣೆ ಮಾಡಲು ಕಾಮಗಾರಿ ಪ್ರಗತಿಯಲ್ಲಿದೆ.







ತ್ಯಾಜ್ಯವನ್ನು ಸಂಪನ್ಮೂಲವಾಗಿಸಿ
ಸ್ವಚ್ಛ ಪರಿಸರ ನಿರ್ಮಿಸಿ

